ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:1628/2018

ಚಾಸಾ:6 ಪ್ರಾಸಾ:5

ದಿನಾಂಕ: 24.02.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಗಣೇಶ |
| ತಂದೆಯ ಹೆಸರು | : | ಗೋಪಾಲ |
| ವಯಸ್ಸು | : | 55 ವರ್ಷ |
| ಉದ್ಯೋಗ | : | ಕೂಲಿ ಕೆಲಸ |
| ವಾಸ ಸ್ಥಳ | : | ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**<u>ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:</u>**

ಆರೋಪಿಯ ಪರಿಚಯವಿಲ್ಲ. ಸಾಕ್ಷಿಗೆ ನಿಪಿ-3ರ ಮಹಜರನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ಸದ್ರಿ ಸಹಿಯನ್ನು 23-11-2017 ರಂದು ಆನಗಳ್ಳಿ ಬಳಿ ಪೊಲೀಸರು ಮಹಜರಿಗೆ ಸಹಿ ಪಡೆದಿರುತ್ತಾರೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಪೊಲೀಸರು ನನ್ನನ್ನು ವಿಚಾರಣೆ ಮಾಡಿಲ್ಲ ಮತ್ತು ನಾನು ಯಾವುದೇ ಹೇಳಿಕೆಯನ್ನು ನೀಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:</u>**

ದಿ: 23-11-2017 ರಂದು ನ್ಯಾಯಾಲಯದ ಮುಂದೆ ಇರುವ ಆರೋಪಿ ತಾನು ಕೃತ್ಯ ಎಸಗಿದ ಸ್ಥಳವೆಂದು ತೋರಿಸುತ್ತಿದ್ದಾಗ ನಾನು ಹಾಜರು ಇದ್ದು ಮಧ್ಯಾಹ್ನ 12-50 ರಿಂದ 1-

50ರವರೆಗೂ ಪಂಚನಾಮೆಯನ್ನು ಜರುಗಿಸಿ ನಿಪಿ-3ನ್ನು ಬರೆದು ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಮೇಲೆ ಹೇಳಿದ ಕ್ರಮವನ್ನು ನನ್ನ ಸಮಕ್ಷಮ ಜರುಗಿಸಿದ್ದರೂ ಆರೋಪಿ ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**